**All India Radio: Bangalore**
**National Bulletin In Kannada**
**25.10.2025 7.35 p.m.**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**25.10.2025 7.35 p.m.**

**<><><><>**

ಮುಖ್ಯಾಂಶಗಳು

೧. ಮುಂದಿನ ಎರಡು ವರ್ಷಗಳಲ್ಲಿ ಭಾರತ ಮೊಬೈಲ್ ಫೋನ್ ಘಟಕಗಳ ಸಂಪೂರ್ಣ ದೇಶೀಯ ಉತ್ಪಾದನೆ ಸಾಧಿಸಲಿದೆ - ಸಚಿವ ಅಶ್ವಿನಿ ವೈಷ್ಣವ್

೨. ಭಾರತೀಯ ಸೇನೆಯ ಪ್ರಮುಖ ಕಲ್ಯಾಣ ಉಪಕ್ರಮಗಳ ಸರಣಿ ಉದ್ಘಾಟಿಸಿದ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್

೩. ೧೨೭ನೇ ಆವೃತ್ತಿಯ ಮನ್-ಕಿ-ಬಾತ್‌ನಲ್ಲಿ ನಾಳೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ

೪. ಆಸ್ಟ್ರೇಲಿಯಾ ವಿರುದ್ಧ ೩-೦ ಅಂತರದಲ್ಲಿ ಕ್ರಿಕೆಟ್ ಸರಣಿ ವಶಪಡಿಸಿಕೊಂಡ ಭಾರತ ತಂಡ

**************

ಭಾರತ ಎರಡು ವರ್ಷಗಳಲ್ಲಿ ಮೊಬೈಲ್ ಫೋನ್ ಘಟಕಗಳ ಸಂಪೂರ್ಣ ದೇಶೀಯ ಉತ್ಪಾದನೆಯನ್ನು ಸಾಧಿಸಲಿದೆ ಎಂದು, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಸಿಸಿಟಿವಿ ಸೇರಿದಂತೆ ವಿವಿಧ ಅಪ್ಲಿಕೇಶನ್‌ಗಳಿಗೆ ಚಿಪ್‌ಸೆಟ್‌ಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ, ಸರ್ವರ್‌ಗಳು ಸೇರಿದಂತೆ ಉನ್ನತ-ಕಾರ್ಯಕ್ಷಮತೆಯ ಕಂಪ್ಯೂಟಿಂಗ್‌ಗಾಗಿ ಇಂಧನ-ಸಮರ್ಥ ಮೈಕ್ರೋ-ಪ್ರೊಸೆಸರ್‌ಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ೨೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಹೂಡಿಕೆ ಮಾಡಲಿದೆ ಎಂದು ಹೇಳಿದರು. ಇಲ್ಲಿಯವರೆಗೆ ೧೨ ಲಕ್ಷಕ್ಕೂ ಹೆಚ್ಚು ಕೇಂದ್ರ ಸರ್ಕಾರಿ ಉದ್ಯೋಗಿಗಳನ್ನು, ಜೊಹೊದ ಸ್ಥಳೀಯ ಡಿಜಿಟಲ್ ಸೂಟ್‌ನಲ್ಲಿ ಸೇರಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ವೀಡಿಯೊಗಳು ಮತ್ತು ಆನ್‌ಲೈನ್ ವಿಷಯದ ಸತ್ಯಾಸತ್ಯತೆಯನ್ನು ಪರಿಶೀಲಿಸಲು ಸತ್ಯ-ಪರಿಶೀಲನೆಗಾಗಿ ಚಾಟ್‌ಬಾಟ್ ಅನ್ನು ಸಹ ಅಭಿವೃದ್ಧಿಪಡಿಸಲಾಗುತ್ತಿದೆ, ಇದು ನಕಲಿ ವಿಷಯದ ಹರಡುವಿಕೆಯನ್ನು ತಡೆಯಲು ಸಹಾಯಕವಾಗಲಿದೆ ಎಂದು ಸಚಿವರು ಹೇಳಿದರು.

**************

ರಾಜಸ್ಥಾನದ ಜೈಸಲ್ಮೇರ್‌ನಲ್ಲಿ ನಡೆದ ಸೇನಾ ಕಮಾಂಡರ್‌ಗಳ ಸಮ್ಮೇಳನದ ಸಂದರ್ಭದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಪ್ರಮುಖ ಡಿಜಿಟಲ್ ಮತ್ತು ಕಲ್ಯಾಣ ಉಪಕ್ರಮಗಳ ಸರಣಿಯನ್ನು ಉದ್ಘಾಟಿಸಿದರು. ಇದು ಭಾರತೀಯ ಸೇನೆಯ ಪರಿವರ್ತನೆಯ ದಶಕದ ದೃಷ್ಟಿಕೋನವನ್ನು ಬಲಪಡಿಸುತ್ತದೆ. ಇದೇ ಸಮಯದಲ್ಲಿ, ಅವರು ಕೊನಾರ್ಕ್ ಮತ್ತು ಫೈರ್ & ಫ್ಯೂರಿ ಕಾರ್ಪ್ಸ್‌ಗಾಗಿ ಎಡ್ಜ್ ಡೇಟಾ ಸೆಂಟರ್‌ಗಳನ್ನು ಉದ್ಘಾಟಿಸಿದರು. ಇದು ಸೈನ್ಯದ ಡಿಜಿಟಲ್ ಮೂಲಸೌಕರ್ಯವನ್ನು ಬಲಪಡಿಸುವಲ್ಲಿ ಪ್ರಮುಖ ಹೆಜ್ಜೆಯಾಗಿದೆ. ಇದೇ ಸಂದರ್ಭದಲ್ಲಿ, ಅರ್‌ಮಾನ್ ಪ್ಲಾಟ್‌ಫಾರ್ಮ್ ಮೂಲಕ ೧ ಸಾವಿರದ ೨೦೦ ಕ್ಕೂ ಹೆಚ್ಚು ರೈಲುಗಳಲ್ಲಿ ರಕ್ಷಣಾ ಕರ್ತವ್ಯ ಕೋಟಾ ಸೀಟುಗಳ ನಿರ್ವಹಣೆಯನ್ನು ಡಿಜಿಟಲೀಕರಣಗೊಳಿಸಲು 'ಸೈನಿಕ್ ಯಾತ್ರಿ ಮಿತ್ರ' ಅಪ್ಲಿಕೇಶನ್ ಅನ್ನು ಸಹ ಅನಾವರಣಗೊಳಿಸಲಾಯಿತು. ಸೇವೆ ಸಲ್ಲಿಸುವ ಸಿಬ್ಬಂದಿಗೆ ಪಾರದರ್ಶಕತೆ ಮತ್ತು ಪ್ರಯಾಣದ ಅನುಕೂಲತೆಯನ್ನು

ಖಚಿತಪಡಿಸಿಕೊಳ್ಳುವ ಗುರಿಯನ್ನು ಈ ಅಪ್ಲಿಕೇಶನ್ ಹೊಂದಿದೆ. ಈ ಉಪಕ್ರಮಗಳು ಭಾರತೀಯ ಸೇನೆಯ ಡಿಜಿಟಲ್ ರೂಪಾಂತರ, ಕಾರ್ಯಾಚರಣೆಯ ದಕ್ಷತೆ ಮತ್ತು ಅದರ ಸಿಬ್ಬಂದಿಯ ಕಲ್ಯಾಣಕ್ಕೆ ಇರುವ ಬದ್ಧತೆಯನ್ನು ಎತ್ತಿ ತೋರಿಸುತ್ತವೆ ಎಂದು ಅವರು ಹೇಳಿದ್ದಾರೆ.

**************

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳ ಜನರೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೨೭ನೇ ಸಂಚಿಕೆಯಾಗಲಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಆಕಾಶವಾಣಿ ಈ ಕಾರ್ಯಕ್ರಮವನ್ನು ಪ್ರಸಾರ ಮಾಡಲಿದೆ.

**************

ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದ ಚುನಾವಣಾ ಪ್ರಚಾರವನ್ನು ಎನ್‌ಡಿಎ ಮತ್ತು ಮಹಾಘಟಬಂಧನ್ ಎರಡೂ ಮೈತ್ರಿಕೂಟಗಳ ತಾರಾ ಪ್ರಚಾರಕರು ತೀವ್ರಗೊಳಿಸಿದ್ದಾರೆ. ಬಿಜೆಪಿಯ ಹಿರಿಯ ನಾಯಕ ಅಮಿತ್ ಶಾ, ಖಗಾರಿಯಾದಲ್ಲಿ ಚುನಾವಣಾ ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಿದರು. ಅವರು ಮುಂಗರ್ ಮತ್ತು ನಳಂದ ಜಿಲ್ಲೆಗಳಲ್ಲಿಯೂ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ಏತನ್ಮಧ್ಯೆ, ಖಗಾರಿಯಾದಲ್ಲಿ ನಡೆಯಬೇಕಿದ್ದ ಆರ್‌ಜೆಡಿ ನಾಯಕ ತೇಜಸ್ವಿ ಪ್ರಸಾದ್ ಯಾದವ್ ಅವರ ಸಾರ್ವಜನಿಕ ಸಭೆಯನ್ನು ಮುಂದೂಡಲಾಗಿದೆ. ಪಾಟ್ನಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತೀಯ ಜನತಾ ಪಕ್ಷವು ನಕಾರಾತ್ಮಕ ರಾಜಕೀಯದಲ್ಲಿ ತೊಡಗಿದೆ ಎಂದು ಆರೋಪಿಸಿದ್ದಾರೆ. ಉದ್ಯೋಗ, ಕೈಗಾರಿಕಾ ಅಭಿವೃದ್ಧಿ ಮತ್ತು ವಲಸೆಯಂತಹ ಸಮಸ್ಯೆಗಳನ್ನು ಪರಿಹರಿಸಲು ಎನ್‌ಡಿಎ ಸರ್ಕಾರ ವಿಫಲವಾಗಿದೆ. ಎನ್‌ಡಿಎ ಮತ್ತು ಮಹಾಘಟಬಂಧನ್ ಎರಡೂ ಜನರ ಆಕಾಂಕ್ಷೆಗಳನ್ನು ಪೂರೈಸುವಲ್ಲಿ ವಿಫಲವಾಗಿವೆ ಎಂದು ಜನ್ ಸುರಾಜ್ ಪಕ್ಷದ ಸಂಸ್ಥಾಪಕ ಪ್ರಶಾಂತ್ ಕಿಶೋರ್ ಆರೋಪಿಸಿದರು. ಮೋತಿಹರಿಯಲ್ಲಿ ಜನ್ ಸುರಾಜ್, ಬಿಹಾರಕ್ಕೆ ಉತ್ತಮ ಪರ್ಯಾಯವನ್ನು ಪ್ರತಿನಿಧಿಸುತ್ತದೆ ಎಂದು ಹೇಳಿಕೊಂಡಿದ್ದಾರೆ.

**************

ಆರೋಗ್ಯ ಸಂಶೋಧನೆಯಲ್ಲಿ ಜಾಗತಿಕ ಮಾನದಂಡಗಳನ್ನು ಸಾಧಿಸಲು ಆರೋಗ್ಯ ರಕ್ಷಣೆಯಲ್ಲಿ ಖಾಸಗಿ ವಲಯದ ಭಾಗವಹಿಸುವಿಕೆಯನ್ನು ಪ್ರೋತ್ಸಾಹಿಸುವ ಪ್ರಯತ್ನಗಳ ಕುರಿತು, ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಒತ್ತಿ ಹೇಳಿದರು. ದೆಹಲಿ ವಿಶ್ವವಿದ್ಯಾಲಯದ ಯೂನಿವರ್ಸಿಟಿ ಕಾಲೇಜ್ ಆಫ್ ಮೆಡಿಕಲ್ ಸೈನ್ಸಸ್‌ನ ೫೪ನೇ ಸಂಸ್ಥಾಪನಾ ದಿನ ಮತ್ತು ಘಟಿಕೋತ್ಸವವನ್ನು ಉದ್ದೇಶಿಸಿ ಮಾತನಾಡಿದ ಅವರು. ಶೈಕ್ಷಣಿಕ, ಸಂಶೋಧನೆ ಮತ್ತು ಕೈಗಾರಿಕೆಗಳ ನಡುವಿನ ಏಕೀಕರಣವು ಮುಂದಿನ ದಾರಿ ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಬಾಹ್ಯಾಕಾಶ, ಪರಮಾಣು ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಖಾಸಗಿ ವಲಯಕ್ಕೆ ಅವಕಾಶಗಳನ್ನು ತೆರೆಯುವುದು ಸಾರ್ವಜನಿಕ ಮತ್ತು ಖಾಸಗಿ ವಲಯದ ನಡುವಿನ ಅಂತರವನ್ನು ಕಡಿಮೆ ಮಾಡಲು ಸಹಾಯ ಮಾಡಿದೆ ಎಂದು ಸಚಿವರು ಹೇಳಿದರು. ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ದೇಶದ ಗುರಿಯನ್ನು ಸಾಕಾರಗೊಳಿಸುವತ್ತ ಕೆಲಸ ಮಾಡುವಂತೆ ಪದವೀಧರರನ್ನು ಅವರು ಒತ್ತಾಯಿಸಿದರು. ಜೈವಿಕ ತಂತ್ರಜ್ಞಾನ ಮತ್ತು ಸಂಶೋಧನಾ ಕ್ಷೇತ್ರದಲ್ಲಿ ದೇಶದ ಇತ್ತೀಚಿನ ಪ್ರಗತಿಗಳನ್ನು ಸಚಿವರು ಶ್ಲಾಘಿಸಿದರು.

**************

ಪ್ರಸ್ತಾವಿತ ಸುರಂಗ ರಸ್ತೆ ಯೋಜನೆಯನ್ನು ಪ್ರಶ್ನಿಸಿ, ಸಂಸದ ತೇಜಸ್ವಿ ಸೂರ್ಯ ಹಾಗೂ ನಟ ಪ್ರಕಾಶ್ ಬೆಳವಾಡಿಯವರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಯಲ್ಲಿ ನ್ಯಾಯಾಲಯದ ಮುಂದೆ ಇಂದು ಹಾಜರಾದರು. ಯೋಜನೆಗೆ ಪರಿಸರ ಪರಿಣಾಮ ಮೌಲ್ಯಮಾಪನವನ್ನು ನಡೆಸದಿರುವುದು, ಬೆಂಗಳೂರು ಮಹಾನಗರ ಭೂ ಸಾರಿಗೆ ಪ್ರಾಧಿಕಾರದೊಂದಿಗೆ ಸಮಾಲೋಚಿಸದಿರುವುದು ಮತ್ತು ವಿವರವಾದ ಯೋಜನಾ ವರದಿ ಮತ್ತು ವಿಶೇಷವಾಗಿ ಐತಿಹಾಸಿಕ ಲಾಲ್‌ಬಾಗ್ ಬಂಡೆಯ ಕೆಳಗೆ ಹಾದುಹೋಗುವ ಸುರಂಗದ ಜೋಡಣೆಯ ಬಗ್ಗೆ ಇರುವ ಕಳವಳಗಳನ್ನು ಈ ಅರ್ಜಿಯು ಪ್ರಶ್ನಿಸಿದೆ.

**************

ಛಾತ್ ಪೂಜೆಯ ಸಮಯದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ಪೂರೈಸಲು ಭಾರತೀಯ ರೈಲ್ವೆ ವ್ಯಾಪಕ ವ್ಯವಸ್ಥೆಗಳನ್ನು ಮಾಡಿದೆ, ಇದು ದೇಶಾದ್ಯಂತ ಹಬ್ಬಕ್ಕೆ ಹೋಗುವವರಿಗೆ ಸುಗಮ ಮತ್ತು ಸುರಕ್ಷಿತ ಪ್ರಯಾಣವನ್ನು ಖಚಿತಪಡಿಸುತ್ತದೆ. ಹಬ್ಬದ ಋತುವಿನ ನಂತರ ಪ್ರಯಾಣಿಕರು ತಮ್ಮ ಕೆಲಸದ ಸ್ಥಳಗಳಿಗೆ ಮರಳಲು ಅನುಕೂಲವಾಗುವಂತೆ ಸುಮಾರು ೬ ಸಾವಿರದ ೧೮೧ ವಿಶೇಷ ರೈಲುಗಳನ್ನು ನಿಯೋಜಿಸಲಾಗಿದೆ. ಮುಂದಿನ ಮೂರು ದಿನಗಳಲ್ಲಿ ಒಂಭೈನೂರಕ್ಕೂ ಹೆಚ್ಚು ವಿಶೇಷ ರೈಲುಗಳು ಓಡಲಿವೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ಪ್ರಯಾಣಿಕರ ದಟ್ಟಣೆಯನ್ನು ನಿರ್ವಹಿಸಲು ಬಿಹಾರ ಮತ್ತು ಉತ್ತರ ಪ್ರದೇಶದ ೩೦ ಪ್ರಮುಖ ನಿಲ್ದಾಣಗಳಲ್ಲಿ ಹೆಚ್ಚುವರಿ ಬೋಗಿಗಳನ್ನು ಜೋಡಿಸಲಾಗಿದೆ ಮತ್ತು ಹವಾಮಾನ ನಿರೋಧಕ ಹೋಲ್ಡಿಂಗ್ ಪ್ರದೇಶಗಳನ್ನು ಸ್ಥಾಪಿಸಲಾಗಿದೆ. ಛಾತ್ ಹಬ್ಬಗಳ ಸಮಯದಲ್ಲಿ ಸುಗಮ ಕಾರ್ಯಾಚರಣೆಯನ್ನು ನಿರ್ವಹಿಸಲು ಈ ನಿಲ್ದಾಣಗಳು ಹೆಚ್ಚುವರಿ ಟಿಕೆಟ್ ಕೌಂಟರ್‌ಗಳು, ಸಿಸಿಟಿವಿ ಕಣ್ಗಾವಲು ಮತ್ತು ಇತರ ಪ್ರಯಾಣಿಕ ಸ್ನೇಹಿ ವ್ಯವಸ್ಥೆಗಳನ್ನು ಸಹ ಹೊಂದಿವೆ ಎಂದು ಸಚಿವಾಲಯ ಹೇಳಿದೆ.

**************

ಸಿಡ್ನಿ ಕ್ರಿಕೆಟ್ ಮೈದಾನದಲ್ಲಿ ನಡೆದ ಏಕದಿನ ಸರಣಿಯ ಮೂರನೇ ಮತ್ತು ಅಂತಿಮ ಪಂದ್ಯದಲ್ಲಿ ಭಾರತ ತಂಡ ಆಸ್ಟ್ರೇಲಿಯಾವನ್ನು ೯ ವಿಕೆಟ್‌ಗಳಿಂದ ಸೋಲಿಸಿ, ಮೂರು ಪಂದ್ಯಗಳ ಸರಣಿಯನ್ನು ತನ್ನದಾಗಿಸಿಕೊಂಡಿದೆ. ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಆತಿಥೇಯ ಆಸ್ಟ್ರೇಲಿಯಾ ತಂಡ, ೪೬.೪ ಓವರ್‌ಗಳಲ್ಲಿ ೨೩೬ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ೨೩೭ ರನ್‌ಗಳ ಗುರಿ ಬೆನ್ನತ್ತಿದ ಭಾರತ, ೩೮.೩ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ಗುರಿ ತಲುಪಿತು. ಆಸ್ಟ್ರೇಲಿಯಾ ಪರ ಮ್ಯಾಟ್ ರೆನ್‌ಶಾ ೫೬ ರನ್‌ಗಳಿಸಿದರೆ, ಭಾರತದ ಪರ ವೇಗಿ ಹರ್ಷಿತ್ ರಾಣಾ ನಾಲ್ಕು ವಿಕೆಟ್ ಮತ್ತು ಸ್ಪಿನ್ನರ್ ವಾಷಿಂಗ್ಟನ್ ಸುಂದರ್ ಎರಡು ವಿಕೆಟ್‌ಗಳನ್ನು ಪಡೆದರು. ಬ್ಯಾಟಿಂಗ್‌ನಲ್ಲಿ ಭಾರತದ ಪರ ರೋಹಿತ್ ಶರ್ಮಾ ತಮ್ಮ ೩೩ ನೇ ಏಕದಿನ ಶತಕ ಸಿಡಿಸಿದರು, ಹಾಗೂ ವಿರಾಟ್ ಕೊಹ್ಲಿ ತಮ್ಮ ಅರ್ಧಶತಕದ ನೆರವಿನಿಂದ ಭಾರತದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು.

**************

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ಅವರು ವೈದ್ಯಕೀಯ ಶಿಕ್ಷಣದಲ್ಲಿ ದೇಶದ ಪ್ರಗತಿಯನ್ನು ಶ್ಲಾಘಿಸಿದ್ದಾರೆ. ದೇಶದಲ್ಲಿ ಈಗ ೮೧೯ ವೈದ್ಯಕೀಯ ಕಾಲೇಜುಗಳಿವೆ ಎಂದು ಅವರು ಹೇಳಿದ್ದಾರೆ. ನವದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯ - ಏಮ್ಸ್‌ನ ೫೦ನೇ ಘಟಿಕೋತ್ಸವವನ್ನುದ್ದೇಶಿಸಿ ಮಾತನಾಡಿದ ಸಚಿವರು, ದೇಶದಲ್ಲಿ ಪದವಿಪೂರ್ವ ವೈದ್ಯಕೀಯ ಸೀಟುಗಳು ಈಗ ೫೧ ಸಾವಿರದಿಂದ ೧ ಲಕ್ಷದ ೨೯ ಸಾವಿರಕ್ಕೆ ಏರಿವೆ. ಸ್ನಾತಕೋತ್ತರ ವೈದ್ಯಕೀಯ ಸೀಟುಗಳ ಸಂಖ್ಯೆಯೂ ಸುಮಾರು ೭೮ ಸಾವಿರಕ್ಕೆ ಏರಿಕೆ ಕಂಡಿವೆ ಎಂದು ಅವರು ಹೇಳಿದರು. ವೈದ್ಯಕೀಯ ವಿಜ್ಞಾನ, ತರಬೇತಿ ಮತ್ತು ಆರೋಗ್ಯ ರಕ್ಷಣೆ ಕ್ಷೇತ್ರಗಳಲ್ಲಿ, ಆರೋಗ್ಯ ಸೇವೆಯ

ಶ್ರೇಷ್ಠತೆ ಮತ್ತು ರೋಗಿಗಳ ಆರೈಕೆಯಲ್ಲಿ ಏಮ್ಸ್ ತನ್ನನ್ನು ತಾನು ಮುಂಚೂಣಿಯಲ್ಲಿರಿಸಿಕೊಂಡಿದೆ. ಕೃತಕ ಬುದ್ಧಿಮತ್ತೆ ಚಾಲಿತ ರೋಗನಿರ್ಣಯ ಮತ್ತು ರೋಬೋಟಿಕ್ ಶಸ್ತ್ರಚಿಕಿತ್ಸೆ ತರಬೇತಿಯಲ್ಲೂ ಏಮ್ಸ್ ಮುಂಚೂಣಿಯಲ್ಲಿದೆ. ದೇಶದಲ್ಲೇ ಮೊದಲ ಬಾರಿಗೆ ಏಮ್ಸ್ ಎರಡು ಮೂತ್ರಪಿಂಡ ಕಸಿ ಮುಂತಾದ ಪರಿವರ್ತನಾಶೀಲ ಕಾರ್ಯವಿಧಾನಗಳನ್ನು ಯಶಸ್ವಿಯಾಗಿ ನಿರ್ವಹಿಸಿದೆ ಎಂದು ಸಚಿವರು ಹೇಳಿದರು.

**************

ರಷ್ಯಾದ ಎರಡು ದೊಡ್ಡ ತೈಲ ಕಂಪನಿಗಳಾದ ರೋಸ್ನೆಫ್ಟ್ ಮತ್ತು ಲುಕೋಯಿಲ್ ಮೇಲೆ ಅಮೆರಿಕ ನಿರ್ಬಂಧ ಹೇರಿದ ನಂತರ ಮಾರುಕಟ್ಟೆಯಲ್ಲಿ ನಿನ್ನೆ ತೈಲ ಬೆಲೆಗಳು ಕುಸಿದವು. ಆದರೆ ಈ ವಾರಕ್ಕೆ ಬಲವಾದ ಲಾಭವನ್ನು ದಾಖಲಿಸಿದವು. ಈ ಎರಡು ಕಂಪನಿಗಳು ಒಟ್ಟಾಗಿ ಜಾಗತಿಕ ತೈಲ ಉತ್ಪಾದನೆಯ ಶೇಕಡಾ ೫ ಕ್ಕಿಂತ ಹೆಚ್ಚು ಪಾಲನ್ನು ಹೊಂದಿವೆ. ಬ್ರೆಂಟ್ ಕಚ್ಚಾ ತೈಲದ ಫ್ಯೂಚರ್‌ಗಳು ನಿನ್ನೆ, ಅಲ್ಪ ಕುಸಿತ ಕಂಡು ಪ್ರತಿ ಬ್ಯಾರೆಲ್‌ಗೆ ೬೫ ಡಾಲರ್, ೯೪ ಸೆಂಟ್‌ಗಳಲ್ಲಿ ಸ್ಥಿರವಾದರೆ, ಡಬ್ಲ್ಯುಟಿಐ ಕಚ್ಚಾ ತೈಲದ ಫ್ಯೂಚರ್‌ಗಳು ಕೂಡ ಸುಮಾರು ಅರ್ಧ ಶೇಕಡಾ ಕುಸಿದು ಪ್ರತಿ ಬ್ಯಾರೆಲ್‌ಗೆ ೬೧ ಡಾಲರ್ ಮತ್ತು ೫೦ ಸೆಂಟ್‌ಗಳಲ್ಲಿ ಮುಕ್ತಾಯಗೊಂಡವು.

**************